# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 507 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 17-11-2020.

ಕರ್ನಾಟಕ ಗ್ರಾಮ ಸ್ವರಾಜ್ಯ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993 ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ರ ಪ್ರಕರಣ 58-ಇ, 61-ಎ, 75, 78, ಮತ್ತು 79ನೇ ಪ್ರಕರಣಗಳೊಂದಿಗೆ ಓದಿಕೊಂಡಂತೆ ಪ್ರಕರಣ 311ರ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿ) ನಿಯಮಗಳು, 2020ರ ಕರಡನ್ನು ದಿನಾಂಕ:17-09-2020ರ ಕರ್ನಾಟಕ ರಾಜ್ಯ ಪತ್ರದ ಭಾಗ-IV-A ರಲ್ಲಿ ಪ್ರಕಟಿಸಿ, ಅದರಿಂದ ಬಾಧಿತರಾಗುವ ವ್ಯಕ್ತಿಗಳಿಂದ ಸದರಿ ಕರಡಿಗೆ ಆಕ್ಷೇಪಣೆ ಮತ್ತು ಸಲಹೆಗಳನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಸಲ್ಲಿಸಬೇಕೆಂದು ಕೋರಿರುವುದರಿಂದ;

ಮತ್ತು ಸದರಿ ರಾಜ್ಯ ಪತ್ರವು ಸಾರ್ವಜನಿಕರಿಗೆ ದಿನಾಂಕ:17-09-2020 ರಂದು ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು, ಸದರಿ ಕರಡಿನ ಸಂಬಂಧದಲ್ಲಿ ರಾಜ್ಯ ಸರ್ಕಾರಕ್ಕೆ ಯಾವುದೇ ಆಕ್ಷೇಪಣೆ ಅಥವಾ ಸಲಹೆಗಳು ಬಾರದಿರುವುದರಿಂದ;

ಈಗ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ 311ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಮೂಲಕ ನಿಯಮಗಳನ್ನು ರಚಿಸುತ್ತದೆ, ಎಂದರೆ:-

## ನಿಯಮಗಳು

**1. ಹೆಸರು ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿ) ನಿಯಮಗಳು, 2020 ಎಂದು ಕರೆಯತಕ್ಕದ್ದು.

(2) ಇವು ರಾಜ್ಯ ಪತ್ರದಲ್ಲಿ ಅಂತಿಮವಾಗಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆಬರುತ್ತದೆ.

**2. ಪರಿಭಾಷೆಗಳು.-** ಈ ನಿಯಮಗಳಲ್ಲಿ ವಿಷಯಕ್ಕೆ ಅಥವಾ ಸಂದರ್ಭಕ್ಕೆ ಬೇರೆ ಅರ್ಥದ ಅಗತ್ಯ ಇರದಿದ್ದರೆ.-

(ಎ) "ಅಧಿನಿಯಮ" ಎಂದರೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993. (1993 ರ ಕರ್ನಾಟಕ ಅಧಿನಿಯಮ ಸಂಖ್ಯೆ 14);

(ಬಿ) “ಅಧ್ಯಕ್ಷರು” ಎಂದರೆ ಸಂಬಂಧಪಟ್ಟ ಗ್ರಾಮದ ಗ್ರಾಮ ಪಂಚಾಯಿತಿಯ ಸದಸ್ಯರುಗಳಿಂದ ಗ್ರಾಮ ಸಭೆಯ ಮುಖಾಂತರ ಆಯ್ಕೆಯಾದ ಗ್ರಾಮ ಪಂಚಾಯತಿಯ ಒಬ್ಬ ಸದಸ್ಯನು;;

(ಸಿ) “ಉಪಾದ್ಯಕ್ಷರು” ಎಂದರೆ ಸಂಬಂಧಪಟ್ಟ ಗ್ರಾಮದ ಗ್ರಾಮ ಪಂಚಾಯಿತಿಯ ಸದಸ್ಯರುಗಳಿಂದ ಗ್ರಾಮ ಸಭೆಯ ಮುಖಾಂತರ ಆಯ್ಕೆಯಾದ ಗ್ರಾಮ ಪಂಚಾಯತಿಯ ಒಬ್ಬ ಸದಸ್ಯನು ಅಥವಾ ಗ್ರಾಮ ಸಭೆಯ ಮುಖಾಂತರ ನಾಮನಿರ್ದೇಶನ ಮಾಡಿದ ಸದಸ್ಯನು;

(ಡಿ) “ಸಮಿತಿ” ಎಂದರೆ ನಿಯಮ 4 ರಡಿಯಲ್ಲಿ ರಚಿಸಲ್ಪಟ್ಟಿರುವ ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿ; ಮತ್ತು

(ಇ) “ಸದಸ್ಯ ಕಾರ್ಯದರ್ಶಿ” ಎಂದರೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ ಗ್ರಾಮ ಪಂಚಾಯತಿಯ ಕಾರ್ಯದರ್ಶಿ ಗ್ರೇಡ್-1

**3. ಸಮಿತಿಯ ಕಾರ್ಯವ್ಯಾಪ್ತಿ.-** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಸಂಬಂಧಪಟ್ಟ ಪ್ರತಿಯೊಂದು ಗ್ರಾಮ ಹಾಗೂ ಗ್ರಾಮಕ್ಕೆ ಹೊಂದಿಕೊಂಡಿರುವ ಉಪ-ಗ್ರಾಮಗಳು, ಜನವಸತಿ ಪ್ರದೇಶಗಳನ್ನು ಒಳಗೊಂಡಿರುತ್ತದೆ.-

**4. ಸಮಿತಿಯ ರಚನೆ.-** (ಎ) ಸಂಬಂಧಪಟ್ಟ ಗ್ರಾಮದ ಎಲ್ಲಾ ಗ್ರಾಮ ಪಂಚಾಯತಿಯ ಸದಸ್ಯರು, ಸಮಿತಿ ಕಾರ್ಯದರ್ಶಿ, ನಾಮನಿರ್ದೇಶಿತ ಸದಸ್ಯರು ಎಲ್ಲರನ್ನು ಒಳಗೊಂಡು ಗರಿಷ್ಠ 10 ಸದಸ್ಯರನ್ನೊಳಗೊಂಡ ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿಯಾಗಿರಬೇಕು;

(ಬಿ) ಗ್ರಾಮ ಸಭೆಯಲ್ಲಿ ಸ್ಥಳೀಯ ಔಪಚಾರಿಕ /ಅನೌಪಚಾರಿಕ ಸಂಘ ಸಂಸ್ಥೆಗಳ ಅಂದರೆ ರೈತ ಸಂಘಗಳು, ಮಹಿಳಾ ಸ್ವಸಹಾಯ ಸಂಘಗಳ ಪ್ರತಿನಿಧಿಗಳು ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಇದೇ ತೆರನಾದ ಸಂಘಟನೆಗಳಿಗೆ ಸೇರಿದ ಸದಸ್ಯರುಗಳನ್ನು ಗ್ರಾಮ ಸಭೆಯ ಮುಖಾಂತರ ನಾಮನಿರ್ದೇಶನ ಮಾಡುವುದು;

(ಸಿ) ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿಯ ಒಟ್ಟಾರೆ ಸದಸ್ಯರ ಸಂಖ್ಯೆಯಲ್ಲಿ ಶೇಕಡ 50 ರಷ್ಟು ಮಹಿಳಾ ಸದಸ್ಯರುಗಳಿರಬೇಕು;

(ಡಿ) ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿಯ ಒಟ್ಟಾರೆ ಸದಸ್ಯರ ಸಂಖ್ಯೆಯಲ್ಲಿ ಶೇಕಡ 20ರಷ್ಟು ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಸದಸ್ಯರುಗಳಿರಬೇಕು;

(ಇ) ಅಧ್ಯಕ್ಷರು ಗ್ರಾಮ ಪಂಚಾಯತಿಯ ಸದಸ್ಯರುಗಳು ಗ್ರಾಮ ಸಭೆಯ ಮುಖಾಂತರ ಆ ಗ್ರಾಮದ ಗ್ರಾಮ ಪಂಚಾಯತಿಯ ಒಬ್ಬ ಸದಸ್ಯರನ್ನು ಆಯ್ಕೆ ಮಾಡುವುದು.

(ಎಫ್) ಉಪಾಧ್ಯಕ್ಷರನ್ನು ಗ್ರಾಮ ಸಭೆಯ ಮುಖಾಂತರ ಆ ಗ್ರಾಮದ ಗ್ರಾಮ ಪಂಚಾಯತಿಯ ಒಬ್ಬ ಸದಸ್ಯನು ಅಥವಾ ಗ್ರಾಮ ಸಭೆಯ ಮುಖಾಂತರ ನಾಮನಿರ್ದೇಶನ ಮಾಡಿದ ಸದಸ್ಯನು;

(ಜಿ) ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅಥವಾ ಗ್ರಾಮ ಪಂಚಾಯತಿಯ ಕಾರ್ಯದರ್ಶಿ ಗ್ರೇಡ್-1 ರವರು ಸಮಿತಿ ಸದಸ್ಯ ಕಾರ್ಯದರ್ಶಿಯಾಗಿರಬೇಕು; ಮತ್ತು

(ಹೆಚ್) ಸಮಿತಿಯ ಯಾವೊಬ್ಬ ಸದಸ್ಯರಿಗೂ ಗೌರವಧನ ಅಥವಾ ಇತರೆ ಸಂಭಾವನೆ ಇರುವುದಿಲ್ಲ.

**5. ಸಮಿತಿಯ ಕಾಲಾವಧಿ.-(1)** ಈ ಸಮಿತಿಯಲ್ಲಿನ ಗ್ರಾಮ ಪಂಚಾಯತಿ ಸದಸ್ಯರುಗಳ ಅವಧಿ ಸಮಿತಿ ರಚನೆಯಾದ ದಿನಾಂಕದಿಂದ ಮೂವತ್ತು ತಿಂಗಳುಗಳ ಅವಧಿಯಾಗಿರತಕ್ಕದ್ದು. ಅಥವಾ ಗ್ರಾಮ ಪಂಚಾಯತಿಯು, ಯಾವುದಾದರೂ ಕಾರಣಗಳಿಂದ ಅದರ ಅವಧಿಯು ಮುಕ್ತಾಯವಾದಲ್ಲಿ ಇದರಲ್ಲಿ ಯಾವುದು ಮೊದಲೋ ಆ ಅವಧಿಯವರೆಗೆ ಕಾರ್ಯ ನಿರ್ವಹಿಸುವುದು.

(2) ಸಮಿತಿಯ ನಾಮನಿರ್ದೇಶಿತ ಸದಸ್ಯರುಗಳ ಅವಧಿಯ ನಾಮನಿರ್ದೇಶನಗೊಂಡ ದಿನಾಂಕದಿಂದ ಮೂವತ್ತು ತಿಂಗಳುಗಳ ಅವಧಿಗೆ ಇರತಕ್ಕದ್ದು ಗ್ರಾಮ ಪಂಚಾಯತಿಯ ಅವಧಿಯು ಮುಕ್ತಾಯವಾದರೂ ಮತ್ತೆ ಗ್ರಾಮ ಪಂಚಾಯತಿಯ ರಚನೆಯಾಗುವವರೆಗೂ, ಸಮಿತಿಯ ಇತರ ಸದಸ್ಯರುಗಳು ಸಮಿತಿಯ ಜವಾಬ್ದಾರಿಗಳನ್ನು ನಿರ್ವಹಿಸತಕ್ಕದ್ದು.

**6. ಸಮಿತಿಯ ಉದ್ದೇಶಗಳು, ಜವಾಬ್ದಾರಿಗಳು ಮತ್ತು ಕಾರ್ಯವಿಧಾನಗಳು.- (1) ನೀರು ಸರಬರಾಜು ವ್ಯವಸ್ಥೆ, ಸಮಿತಿಯು ಈ ಕೆಳಕಂಡಂತೆ ಗ್ರಾಮದಲ್ಲಿ ನೀರು ಸರಬರಾಜನ್ನು ಮಾಡುವುದು.-**

(i) ಸಾರ್ವಜನಿಕರಿಗೆ ಶುದ್ಧವಾದ ಮತ್ತು ಅಗತ್ಯ ಪ್ರಮಾಣದ ನೀರು ಸರಬರಾಜು ಮಾಡುವಲ್ಲಿ ಗ್ರಾಮ ಪಂಚಾಯತಿಗೆ ನೆರವಾಗುವುದು. ಕುಡಿಯುವ ನೀರಿಗಾಗಿ ನೀರಿನ ಮೂಲ, ಹರಿಯುವ ನದಿ, ಹೊಳೆಗಳನ್ನು ಸ್ವಚ್ಛಗೊಳಿಸುವ ಮತ್ತು ಸುಸ್ಥಿತಿಯಲ್ಲಿ ಇಡುವಲ್ಲಿ ಅಗತ್ಯ ಸಹಕಾರ ನೀಡಬೇಕು. ಗ್ರಾಮದ ವ್ಯಾಪ್ತಿಯಲ್ಲಿರುವ ಕೆರೆ, ಬಾವಿ, ತೊರೆ ಹಾಗೂ ಇತರೆ ಜಲಮಾರ್ಗಗಳನ್ನು ಆಗಿಂದ್ದಾಗೆಯೇ ದುರಸ್ಥಿಗೊಳಿಸಲು ಹಾಗೂ ನೀರನ್ನು ಪಡೆಯಲು ಗ್ರಾಮ ಪಂಚಾಯತಿಗೆ ನೆರವಾಗುವುದು. ಕುಡಿಯುವ ನೀರಿನ ಸ್ಥಾವರಗಳ ಮುಂದೆ ಹಾಗೂ ಕುಡಿಯುವ ನೀರಿಯ ಮೂಲ ಸ್ಥಾನದಲ್ಲಿ ಸ್ನಾನ ಮಾಡುವುದನ್ನು , ಬಟ್ಟೆ ಒಗೆಯುವುದನ್ನು, ಪ್ರಾಣಿಗಳನ್ನು ತೊಳೆಯುವುದನ್ನು ಅಥವಾ ಇತರೆ ಯಾವುದೇ ಕಾರಣಗಳಿಂದ ನೀರನ್ನು ಕಲುಷಿತಗೊಳಿಸುವುದನ್ನು ತಡೆಗಟ್ಟುವುದು; ಮತ್ತು

(ii) ಕುಡಿಯುವ ನೀರಿಗೆ ಸಂಬಂಧಿಸಿದ ಕಾಮಗಾರಿಗಳ ನಿರ್ವಹಣೆ, ಯಂತ್ರೋಪಕರಣಗಳನ್ನು ಸಂರಕ್ಷಣೆ ಮಾಡುವಲ್ಲಿ ಗ್ರಾಮ ಪಂಚಾಯತಿಗೆ ಸಹಕಾರ ನೀಡುವುದು . ನೀರನ್ನು ಸರಬರಾಜು ಮಾಡುವುದಕ್ಕೆ ಯಾವುದೇ ವ್ಯಕ್ತಿ ಅಥವಾ ಸಂಸ್ಥೆಗಳೊಡನೆ ಗ್ರಾಮ ಪಂಚಾಯತಿಯು ಕರಾರು ಮಾಡಿಕೊಂಡಿದ್ದಲ್ಲಿ ಸದರಿ ಸಂಸ್ಥೆ/ವ್ಯಕ್ತಿಗೆ ಅಗತ್ಯ ಸಹಾಕಾರ ನೀಡುವುದು.

(iii) ಕುಡಿಯುವ ನೀರಿನ ಅಭಾವದ ಪರಿಸ್ಥಿತಿಯಲ್ಲಿ ಖಾಸಗಿ ವ್ಯಕ್ತಿಗಳಿಗೆ ಸಂಬಂಧಿಸಿದ ಬಾವಿಗಳು, ಕೊಳವೆ ಬಾವಿಗಳು ಮತ್ತು ಇತರೆ ಜಲ ಮೂಲಗಳಿಂದ ಗ್ರಾಮಕ್ಕೆ ನೀರು ಒದಗಿಸಬೇಕಾದ ಸಂದರ್ಭದಲ್ಲಿ ಖಾಸಗಿ ಬೋರ್ ವೆಲ್ ಮಾಲೀಕರ

ಮನವೊಲಿಸುವಲ್ಲಿ ಮತ್ತು ಕರಾರು ಪ್ರಕ್ರಿಯೆಯಲ್ಲಿ ಗ್ರಾಮ ಪಂಚಾಯತಿಗೆ ಅಗತ್ಯ ಸಹಾಕಾರ ನೀಡುವುದು.

**(2) ಸ್ವಚ್ಛತೆ, ನೈರ್ಮಲ್ಯೀಕರಣ ಮತ್ತು ಚರಂಡಿ ವ್ಯವಸ್ಥೆಯ ಬಗ್ಗೆ ,- ಗ್ರಾಮದಲ್ಲಿ ಸ್ವಚ್ಛತೆ ನೈರ್ಮಲ್ಯೀಕರಣಕ್ಕಾಗಿ ಗ್ರಾಮ ಪಂಚಾಯತಿಗೆ ಈ ಸಮಿತಿಯು ಕೆಳಕಂಡ ಅಂಶಗಳನ್ನು ಕಾರ್ಯಗತಗೊಳಿಸಲು ನೆರವಾಗುವುದು,-**

(i) ಗ್ರಾಮದ ಯಾವುದೇ ಕಟ್ಟಡ ಅಥವಾ ಗುಡಿಸಲಿನ ಮಾಲೀಕನು ಅಥವಾ ಅಂಗಡಿ ಮಾಲೀಕನು ಶೌಚ ಗೃಹಗಳನ್ನು ಸ್ವಚ್ಛವಾಗಿ ನಿರ್ವಹಿಸಿದ್ದರೆ ಅಂಥವರಿಗೆ ಸ್ವಚ್ಛತೆಯ ಕುರಿತು ಅರಿವು ಮೂಡಿಸಲು ಯತ್ನಿಸುವುದು. ಸದರಿ ಅನೈರ್ಮಲ್ಯ ಪ್ರವೃತ್ತಿ ಮುಂದುವರೆದ ಸಂದರ್ಭದಲ್ಲಿ ಮಂದಿನ ಅಗತ್ಯ ಕ್ರಮಕ್ಕಾಗಿ ಗ್ರಾಮ ಪಂಚಾಯತಿಯ ಗಮನಕ್ಕೆ ತರುವುದು. ನಿಗದಿತ ಸಮಯದೊಳಗೆ ಸ್ವಚ್ಛತೆಯನ್ನು ಮೂಡಿಸುವಂತೆ ಅಗತ್ಯಪಡಿಸಬಹುದು ಹಾಗೂ ನಿಗದಿತ ಸಮಯದಲ್ಲಿ ಸಂಬಂಧಪಟ್ಟವರು ಸ್ವಚ್ಛ ಮಾಡದಿದ್ದರೆ ಗ್ರಾಮ ಪಂಚಾಯತಿಯ ವತಿಯಿಂದ ಆ ಪ್ರದೇಶವನ್ನು ಸ್ವಚ್ಛಗೊಳಿಸಿ, ಅದಕ್ಕೆ ಭರಿಸುವ ವೆಚ್ಚವನ್ನು ಸಂಬಂಧಪಟ್ಟ ಪ್ರದೇಶದ ಮಾಲೀಕರಿಂದ ತೆರಿಗೆ ಬಾಕಿ ರೂಪದಲ್ಲಿ ವಸೂಲಿ ಮಾಡಲು ನೆರವಾಗುವುದು;

(ii) ಆರೋಗ್ಯಕ್ಕೆ ಹಾನಿಕರವಾದ ಅಥವಾ ನೆರೆಹೊರೆಯವರಿಗೆ ಅಸಹ್ಯಕರವಾಗಿರುವ ಅಥವಾ ಉಪದ್ರವವಾಗುವಂತ ಚಟುವಟಿಕೆಗಳನ್ನು ನಡೆಸುವ ಅಥವಾ ನಿವೇಶನಗಳನ್ನು ಹೊಲಸು ಸಂಗ್ರಹಣೆಗಾಗಿ ಉಪಯೋಗಿಸುವ ಅಥವಾ ನಿವೇಶನವನ್ನು ನಿರಂತರವಾಗಿ ನೀರು ನಿಲ್ಲಲು ಅವಕಾಶ ಮಾಡಿಕೊಟ್ಟಿರುವಂಥಹ ಸ್ಥಳದ ಮಾಲೀಕರಿಗೆ ಸೂಕ್ತ ತಿಳಿವಳಿಕೆ ನೀಡಿ ಅಂತಹ ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸುವಂತೆ ಅರಿವು ಮೂಡಿಸುವುದು;

(iii) ಖಾಲಿ ನಿವೇಶನದಲ್ಲಿ ಸಾರ್ವಜನಿಕರಿಗೆ ತೊಂದರೆಯುಂಟು ಮಾಡುವ ಕುರುಚಲು ಗಿಡಗಳು, ಪಾಪುಸುಕಳ್ಳಿಗಳು ಇನ್ನಿತರ ಅಸಯ್ಯಕರವಾದ ಮತ್ತು ಅಪಾಯಕಾರಿಯಾಗಿ ಬೆಳದಿರುವ ಕಳೆಗಳನ್ನು ತೆಗೆದು ಹಾಕುವಂತೆ ಸಂಬಂಧಪಟ್ಟ ನಿವೇಶನದ ಮಾಲೀಕರಿಗೆ ತಿಳುವಳಿಕೆ ನೀಡುವುದು;

(iv) ಸಮಿತಿಯು ನೀಡುವ ಸೂಚನೆಯನ್ನು ನಿರಾಕರಿಸಿದರೆ ಅಂತಹ ಪ್ರದೇಶವನ್ನು ಗ್ರಾಮ ಪಂಚಾಯತಿಯಿಂದ ಸ್ವಚ್ಛಗೊಳಿಸುವುದು ಹಾಗೂ ಆ ನಿವೇಶನದ ಅನುಭವದಾರರಿಂದ ಸ್ವಚ್ಛಕ್ಕೆ ವೆಚ್ಚವಾದ ಮೊತ್ತವನ್ನು ತೆರಿಗೆ ಬಾಕಿ ರೂಪದಲ್ಲಿ ವಸೂಲಿ ಮಾಡುವಲ್ಲಿ ಗ್ರಾಮ ಪಂಚಾಯತಿಗೆ ನೆರವಾಗುವುದು.

(v) ಗ್ರಾಮ ಪಂಚಾಯತಿ ವ್ಯಾಪ್ತಿಯ ದೇವಸ್ಥಾನ, ಚರ್ಚ್, ಮಸೀದಿ ಮುಂತಾದ ಆರಾಧನೆಯ ಸ್ಥಳದಲ್ಲಿ ಜಾತ್ರೆಗಳನ್ನು, ಉತ್ಸವಗಳನ್ನು ನಡೆಸಿದಾಗ ಆ ಪ್ರದೇಶದ ಸ್ವಚ್ಛತೆ ನಿರ್ವಹಣೆಗಾಗಿ ಸಂಬಂಧಪಟ್ಟ ಧಾರ್ಮಿಕ ಟ್ರಸ್ಟ್‌ಗಳು ಮುಂಗಡ ಹಣವನ್ನು ಗ್ರಾಮ ಪಂಚಾಯತಿಗೆ ಪಾವತಿಸುವಂತೆ ನೋಡಿಕೊಳ್ಳುವುದು;

(vi) ಈ ವಿಷಯಕ್ಕೆ ಸಂಬಂಧಿಸಿದಂತೆ ಅವಶ್ಯವಿದ್ದಲ್ಲಿ ಸಂಬಂಧಪಟ್ಟ ತಹಶೀಲ್ದಾರ್ ಅಥವಾ ಜಿಲ್ಲಾಧಿಕಾರಿಯವರ ಮಧ್ಯಸ್ಥಿಕೆಯ ಮೂಲಕ ವಂತಿಗೆಯನ್ನು ಪಡೆದುಕೊಳ್ಳುವಂತೆ ಗ್ರಾಮ ಪಂಚಾಯತಿಗೆ ಸಲಹೆ ನೀಡುವುದು.;

(vii) ಗ್ರಾಮಗಳಲ್ಲಿ ನೀರು, ಕೊಳಚೆ ನೀರು ಸರಾಗವಾಗಿ ಹರಿದು ಹೋಗಲು ಅನುವಾಗುವಂತೆ ಪಂಚಾಯತಿ ಪ್ರದೇಶದಲ್ಲಿ ಅಥವಾ ಖಾಸಗಿ ವ್ಯಕ್ತಿಯ ಭೂಮಿಯಲ್ಲಿ ಮಾಲೀಕರ ಸಹಮತಿಯೊಡನೆ ಅಥವಾ ಅವರೊಡನೆ ಕರಾರು ಮಾಡಿಕೊಳ್ಳುವ ಮೂಲಕ ಚರಂಡಿ ವ್ಯವಸ್ಥೆಯನ್ನು ರೂಪಿಸುವಲ್ಲಿ ಗ್ರಾಮ ಪಂಚಾಯತಿಗೆ ಅನುವು ನೀಡುವುದು. ಗ್ರಾಮದಲ್ಲಿನ ಯಾವುದೇ ವ್ಯಕ್ತಿ ಅವರುಗಳ ಮನೆಯ ಮುಂದೆ ಇರುವ ಚರಂಡಿಯಲ್ಲಿ ಅಡ್ಡಿಯುಂಟು ಮಾಡಿದ್ದರೆ ಅಂತಹ ವ್ಯಕ್ತಿಗೆ ಸ್ವಚ್ಛತೆಯ ಕುರಿತು ಅರಿವು ಮೂಡಿಸುಲು ಯತ್ನಿಸುವುದು. ಸದರಿ ಅನೈರ್ಮಲ್ಯ ಪ್ರವೃತ್ತಿ ಮುಂದುವರೆದ ಸಂದರ್ಭದಲ್ಲಿ ಮುಂದಿನ ಅಗತ್ಯ ಕ್ರಮಕ್ಕಾಗಿ ಗ್ರಾಮ ಪಂಚಾಯತಿಯ ಗಮನಕ್ಕೆ ತರುವುದು;

(viii) ಜನ ವಸತಿ ಪ್ರದೇಶದಲ್ಲಿ ಮತ್ತು ಮುಖ್ಯ ರಸ್ತೆಗಳಲ್ಲಿ ಸ್ಥಾಪಿತವಾಗಿರುವ ಅಂಗಡಿಗಳು, ಹೋಟೆಲ್‌ಗಳು ಮತ್ತಿತರೆ ತಿಂಡಿ ತಿನಿಸಿನ ಅಂಗಡಿಗಳಲ್ಲಿ ಉಂಟಾಗುವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಂಗಡಣೆ, ಸಂಗ್ರಹಣೆ, ಸಾಗಾಣಿಕೆ ಮತ್ತು ಸೂಕ್ತ ಸಂಸ್ಕರಣೆ ವ್ಯವಸ್ಥೆಯನ್ನು ರೂಪಿಸುವಲ್ಲಿ ಗ್ರಾಮ ಪಂಚಾಯತಿಗೆ ಅಗತ್ಯ ಸಹಕಾರ ನೀಡುವುದು;

(ix) ಜನ ವಸತಿ ಪ್ರದೇಶದಲ್ಲಿ ಮತ್ತು ಮುಖ್ಯ ರಸ್ತೆಗಳಲ್ಲಿ ಸ್ಥಾಪಿತವಾಗಿರುವ ಕೋಳಿ ಮೀನು ಅಥವಾ ಇತರೆ ಮಾಂಸದ ಅಂಗಡಿಗಳಲ್ಲಿ ಉಂಟಾಗುವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಗ್ರಹಿಸಿ, ಸಾಗಾಣಿಕೆ ಮತ್ತು ಸೂಕ್ತ ಸಂಸ್ಕರಣೆ ವ್ಯವಸ್ಥೆಯನ್ನು ರೂಪಿಸುವಲ್ಲಿ ಗ್ರಾಮ ಪಂಚಾಯತಿಗೆ ಅನುವು ಮಾಡಿ ಕೊಡುವುದು;

(x) ಕುಡಿಯುವ ನೀರು ಮತ್ತು ನೈರ್ಮಲ್ಯಕ್ಕೆ ಸಂಬಂಧಿಸಿದ ಎಲ್ಲಾ ಬಳಕೆದಾರರ ಶುಲ್ಕವನ್ನು ಕರ್ನಾಟಕ ರಾಜ್ಯ ನೈರ್ಮಲ್ಯ ಮತ್ತು ತ್ಯಾಜ್ಯ ನಿರ್ವಹಣಾ ನೀತಿ, ಕಾರ್ಯತಂತ್ರ ಹಾಗೂ ಉಪವಿಧಿಗಳು" ಅನ್ವಯ ನಿಗದಿಪಡಿಸಿ ವಸೂಲಾತಿ ಮಾಡುವಲ್ಲಿ ಗ್ರಾಮ ಪಂಚಾಯತಿಗೆ ಅಗತ್ಯ ಸಹಕಾರ ನೀಡಬೇಕು;

(xi) ಗ್ರಾಮದ ವ್ಯಾಪ್ತಿಯ ಮುಖ್ಯ ರಸ್ತೆಗಳಲ್ಲಿ ಅಪಘಾತದಿಂದ ಮೃತಪಡುವ ಯಾವುದೇ ಪ್ರಾಣಿಯ ದೇಹವನ್ನು ಹತ್ತಿರದಲ್ಲಿರುವ ಸರ್ಕಾರಿ ಅಥವಾ ಖಾಸಗಿ ಜಮೀನಿನಲ್ಲಿ ಹೂಳುವುದಕ್ಕೆ ವ್ಯವಸ್ಥೆ ಕಲ್ಪಿಸಲು ಅನುವು ಮಾಡಬೇಕು . ಇದರಿಂದಾಗಿರಸ್ತೆಯಲ್ಲಿ ದುರ್ವಾಸನೆಯಾಗುವುದನ್ನು ಮತ್ತು ಸಾಂಕ್ರಾಮಿಕ ಕಾಯಿಲೆ ಹರಡುವುದನ್ನು ನಿಯಂತ್ರಿಸಬಹುದಾಗಿರುತ್ತದೆ;

(xii) ಗ್ರಾಮದ ನೀರು ಸರಬರಾಜು ಮತ್ತು ನೈರ್ಮಲ್ಯಕ್ಕೆ ಸಂಬಂಧಿಸಿದ ಎಲ್ಲಾ ಕಾರ್ಯಚಟುವಟಿಕೆಗಳ ಜವಾಬ್ದಾರಿಯನ್ನು ನಿರ್ವಹಿಸಲು ಗ್ರಾಮ ಪಂಚಾಯತಿಗೆ ಈ ಸಮಿತಿಯು ನೆರವಾಗತಕ್ಕದ್ದು;

(xiii) ಗ್ರಾಮೀಣ ಜನತೆಯಲ್ಲಿ ನೀರು ಸರಬರಾಜು ಮತ್ತು ನೈರ್ಮಲ್ಯ ಬಗ್ಗೆ ತಿಳಿವಳಿಕೆ, ಅರಿವು ಮೂಡಿಸುವುದು ಹಾಗೂ ಯೋಜನೆಯ ನೀತಿ ನಿಯಮಗಳೊಂದಿಗೆ ವಿಶೇಷವಾಗಿ ಆರೋಗ್ಯ ಮತ್ತು ಶುಚಿತ್ವ ಕುರಿತು ಅರಿವು ಮೂಡಿಸುವುದು;

(xiv) ಪ್ಲಾಸ್ಟಿಕ್ ಬಳಕೆಯ ದುಷ್ಪರಿಣಾಮದ ಬಗ್ಗೆ ಸಮುದಾಯದಲ್ಲಿ ಜಾಗೃತಿ ಮೂಡಿಸುವುದು ಮತ್ತು ಪ್ಲಾಸಿಕ್ ನಿಷೇಧಕ್ಕೆ ಕ್ರಮ ವಹಿಸುವಲ್ಲಿ ಸಹಕರಿಸುವುದು;

(xv) ಸಮುದಾಯವು ಕುಡಿಯುವ ನೀರನ್ನು ಪೋಲು (ವ್ಯರ್ಥ) ಮಾಡದಂತೆ ಜಾಗರೂಕತೆ ವಹಿಸಲು ಮತ್ತು ನೀರಿನ ಸದ್ಬಳಕೆಯ ಬಗ್ಗೆ ಅರಿವು ಮೂಡಿಸುವುದು;

(xvi) ಯೋಜನೆಯ ಪ್ರಯೋಜನ/ಲಾಭ ಹೊಂದುವ ಸಮುದಾಯವನ್ನು ವಿಶೇಷವಾಗಿ ನೀರು ಸರಬರಾಜು ಮತ್ತು ನೈರ್ಮಲ್ಯ ಯೋಜನೆಗಳ ಅನುದಾನ ಮೂಲವಾಗಿ ಸಮುದಾಯ ವಂತಿಗೆ ಸಂಗ್ರಹಣೆಗಾಗಿ (ಯಾವುದಾದರೂ ಇದ್ದರೆ) ಸಕ್ರೀಯವಾಗಿ ತೊಡಗಿಸಿಕೊಳ್ಳುವಂತೆ ಮನವೊಲಿಸುವುದು;

(xvii) ನೀರು ಸರಬರಾಜು ಮತ್ತು ಸ್ವಚ್ಛತೆಗೆ ಸಂಬಂಧಪಟ್ಟ ಯೋಜನೆ, ನಿರ್ಮಾಣ, ಕಾರ್ಯಾಚರಣೆ, ನಿರ್ವಹಣೆ ಮತ್ತು ಮೇಲ್ವಿಚಾರಣೆಯಲ್ಲಿ ಗ್ರಾಮ ಪಂಚಾಯತಿಗೆ ಅನುವು ಮಾಡುವುದು.

(xviii) ಎಲ್ಲಾ ಕುಟುಂಬಗಳು ಶೌಚಾಯಲಗಳನ್ನು ನಿರ್ಮಿಸಿ, ಕುಟುಂಬದ ಎಲ್ಲಾ ಸದಸ್ಯರು ಬಳಸಿಕೊಳ್ಳುವುದನ್ನು ಖಾರತಿಪಡಿಸಿಕೊಳ್ಳುವುದು. ಗ್ರಾಮದ ಪ್ರತಿ ಕುಟುಂಬವು ಶೌಚಾಲಯವನ್ನು ಬಳಸುತ್ತಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು ಮತ್ತು ಶೌಚಾಲಯದ ನಿರ್ಮಾಣ ಹಾಗೂ ಬಳಕೆಗೆ ಪ್ರೇರೇಪಿಸುವುದು;

(xix) ಎಲ್ಲಾ ಕುಟುಂಬಗಳು ಮತ್ತು ವಾಣಿಜ್ಯ ಚಟುವಟಿಕೆಗಳಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ಹಸಿ ಮತ್ತು ಒಣ ಕಸವನ್ನು ವಿಂಗಡಿಸುವ ಮತ್ತು ಸಮರ್ಪಕವಾಗಿ ವಿಲೇ ಮಾಡುವ ಬಗ್ಗೆ ಅರಿವು ಮೂಡಿಸುವುದು. ಎಲ್ಲಾ ಮನೆಗಳಿಗೂ ಶುದ್ಧ ಕುಡಿಯುವ ನೀರು ಸರಬರಾಜು ವ್ಯವಸ್ಥೆ, ನೀರಿನ ಶುದ್ಧತೆಯ ಬಗ್ಗೆ ಸುರಕ್ಷಿತತೆಯ ಕ್ರಮ, ನೀರಿನ ಟ್ಯಾಂಕ್‌ಗಳನ್ನು ಶುಚಿಗೊಳಿಸುವಿಕೆ, ಶುದ್ಧ ಕುಡಿಯುವ ನೀರಿನ ಘಟಕಗಳ ದುರಸ್ಥಿಗೊಳಿಸುವಿಕೆ ಮತ್ತು ಸರಬರಾಜು ವ್ಯವಸ್ಥೆಯಲ್ಲಿ ನೀರು ಕಲುಷಿತವಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಲು ಗ್ರಾಮ ಪಂಚಾಯತಿಗೆ ಅನುವು ಮಾಡುವುದು;

(xx) ಪ್ರತೀ ವರ್ಷ ಮುಂಗಾರು ಪೂರ್ವ ಮತ್ತು ಹಿಂಗಾರು ನಂತರ ಕಡ್ಡಾಯವಾಗಿ ನೀರಿನ ಮಾದರಿಗಳನ್ನು ಪರೀಕ್ಷೆ ಮಾಡಿಸಲು ಮತ್ತು ವರದಿಯನ್ನು ಗ್ರಾಮದ ಸಾರ್ವಜನಿಕ ಸ್ಥಳಗಳಲ್ಲಿ ಪ್ರಕಟಿಸಲು ಮತ್ತು ಆ ಮೂಲಕ ಕುಡಿಯುವ ನೀರಿನ ಗುಣಮಟ್ಟ ಕಾಯ್ದುಕೊಳ್ಳುವಲ್ಲಿ ಗ್ರಾಮ ಪಂಚಾಯತಿಗೆ ನೆರವಾಗುವುದು;

(xxi) ಸಮಿತಿಯು ಗ್ರಾಮವನ್ನು ಬಯಲು ಬಹಿರ್ದೆಸೆ ಮುಕ್ತ ಸ್ಥಿತಿಯಲ್ಲಿಡುವ ಮತ್ತು ಸುಸ್ಥಿರತೆ ಕಾಯ್ದುಕೊಳ್ಳುವ ಜವಾಬ್ದಾರಿಯನ್ನು ವಹಿಸಿಕೊಳ್ಳುವುದು;

(xxii) ಸಮುದಾಯದ ಶೌಚಾಲಯ, ಶಾಲಾ, ಅಂಗನವಾಡಿ, ಸರ್ಕಾರಿ ಆಸ್ಪತ್ರೆಗಳು, ಇತರೆ ಸಾರ್ವಜನಿಕ ಸ್ಥಳಗಳಲ್ಲಿ ನಿರ್ಮಿಸಿರುವ ಶೌಚಾಲಯಗಳ ಬಳಕೆ ಮತ್ತು ನಿರ್ವಹಣೆ ಬಗ್ಗೆ ಮೇಲ್ವಿಚಾರಣೆ ನಡೆಸುವಲ್ಲಿ ಗ್ರಾಮ ಪಂಚಾಯತಿಗೆ ಸಹಕಾರ ನೀಡುವುದು;

(xxiii) ಗ್ರಾಮ ಸಭೆಯೊಂದಿಗೆ ಸಮಾಲೋಚನೆ ನಡೆಸಿ, ತನ್ನ ವ್ಯಾಪ್ತಿಯಲ್ಲಿನ ಗ್ರಾಮ/ ಜನವಸತಿಗಳ ನೀರು ಸರಬರಾಜು ಮತ್ತು ನೈರ್ಮಲ್ಯ ಸೌಕರ್ಯಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ಕುರಿತು ಯೋಜನೆ ರೂಪಿಸುವಲ್ಲಿ ಗ್ರಾಮ ಪಂಚಾಯತಿಗೆ ಸಹಕಾರ ನೀಡುವುದು;

(xxiv) ಗ್ರಾಮದ ವ್ಯಾಪ್ತಿಯಲ್ಲಿ ಸೃಜಿಸಲಾದ ಮೂಲಭೂತ ಸೌಕರ್ಯಗಳ ಕಾರ್ಯಾಚರಣೆ ಮತ್ತು ಮೇಲ್ವಿಚಾರಣೆಗೆ ಹಾಗೂ ಸುಸ್ಥಿರ ನಿರ್ವಹಣೆಗೆ ಬಳಕೆದಾರರ ಶುಲ್ಕ ವಸೂಲಿ ಮಾಡುವಲ್ಲಿ ಗ್ರಾಮ ಪಂಚಾಯತಿಗೆ ಅನುವಾಗುವುದು;

(xxv) ಪ್ರತಿಯೊಂದು ಕುಟುಂಬವು / ವಿಭಾಗ ನೀರು ಸರಬರಾಜು ಮತ್ತು ನೈರ್ಮಲ್ಯ ಸೌಕರ್ಯಗಳನ್ನು ಸರಿಯಾದ ಪ್ರಮಾಣದಲ್ಲಿ ಪಡೆಯುತ್ತಿದೆಯೇ ಮತ್ತು ಅಂತಹ ಸೌಕರ್ಯ/ ಸಂಪನ್ಮೂಲಗಳು ಸಂರಕ್ಷಿತವಾಗಿದೆಯೇ ಎಂಬುದನ್ನು ಖಾತರಿಪಡಿಸಿಕೊಳ್ಳುವುದು; ಮತ್ತು

(xxvi) ಅವಶ್ಯಕತೆ ಕಂಡು ಬಂದಾಗಲೆಲ್ಲಾ, ನೀರು ವಿತರಣಾ ವ್ಯವಸ್ಥೆ ಮೇಲ್ವಿಚಾರಣಾ ಯೋಜನೆಯನ್ನು ತಯಾರಿಸುವಲ್ಲಿ ಮತ್ತು ಪರಿಷ್ಕರಿಸುವಲ್ಲಿ ಗ್ರಾಮ ಪಂಚಾಯತಿಗೆ ಸಲಹೆ ನೀಡುವುದು.

**7. ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸಮಿತಿಯ ಸದಸ್ಯರುಗಳ ಅಧಿಕಾರಗಳು.- (1) ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಅಥವಾ ಸದಸ್ಯರು ವೈಯಕ್ತಿಕವಾಗಿ ಮತ್ತು ಒಟ್ಟಾಗಿ ನೀರು ಸರಬರಾಜು ಮತ್ತು ನೈರ್ಮಲ್ಯ ಕಾಮಗಾರಿಗಳ ಸಮರ್ಪಕ ಅನುಷ್ಠಾನದಲ್ಲಿ ಗ್ರಾಮ ಮಂಚಾಯತಿಗೆ ಅಗತ್ಯ ಸಹಕಾರ ನೀಡುವುದು. ಉಸ್ತುವಾರಿ ಮತ್ತು ನೀರು ಸರಬರಾಜು ಮತ್ತು ನೈರ್ಮಲ್ಯದ ಯಾವುದೇ ಕಾಮಗಾರಿಗಳಲ್ಲಿ ನಿರತರಾದ ಸಿಬ್ಬಂದಿ/ ಕೆಲಸಗಾರರ ಕಾರ್ಯನಿರ್ವಹಣೆ ಬಗ್ಗೆ ತೃಪ್ತಿಕರವಾಗಿಲ್ಲದಿದ್ದ ಪಕ್ಷದಲ್ಲಿ ಅಂತಹ ಸಿಬ್ಬಂದಿ/ ಕೆಲಸಗಾರರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲು ಗ್ರಾಮ ಪಂಚಾಯತಿಗೆ ಶಿಫಾರಸ್ಸು ಸಲ್ಲಿಸಬಹುದು.**

(2) ಸಮಿತಿಯು ಗ್ರಾಮ ಸಮುದಾಯದಿಂದ ನೀರು ಸರಬರಾಜು ಮತ್ತು ನೈರ್ಮಲ್ಯ ಶುಲ್ಕ/ ಬಳಕೆ ಶುಲ್ಕವನ್ನು ವಸೂಲಿ ಮಾಡುವಲ್ಲಿ ಗ್ರಾಮ ಪಂಚಾಯತಿಗೆ ಸಹಕಾರ ನೀಡುವುದು ಮತ್ತು ಶುಲ್ಕಗಳನ್ನು ಪಾವತಿಸುವಂತೆ ಬಳಕೆದಾರರನ್ನು ಮನವೊಲಿಸುವುದು.

(3) ಗ್ರಾಮ ಪಂಚಾಯತಿಯು ಕುಡಿಯುವ ನೀರು ಸರಬರಾಜು ಯೋಜನೆಗಳ ಹಾಗೂ ಸ್ವಚ್ಛತೆ ನೈರ್ಮಲ್ಯ ರಕ್ಷಣೆಗಾಗಿ ಅನುಷ್ಠಾನಗೊಳಿಸುವ ಕಾರ್ಯಾಚರಣೆ ಮತ್ತು ಮೇಲ್ವಿಚಾರಣೆ ವೆಚ್ಚಗಳನ್ನು ಆಧರಿಸಿ, ಬಳಕೆ ಶುಲ್ಕವನ್ನು ನಿಗಧಿಪಡಿಸುವ ಸಂದರ್ಭದಲ್ಲಿ ಸಮಿತಿಯು ಗ್ರಾಮ ಪಂಚಾಯತಿಗೆ ಅಗತ್ಯ ಸಹಕಾರ ನೀಡುವುದು.

(4) ಸಮಿತಿಯ ಕಾರ್ಯಚಟುವಟಿಕೆಗಳ ಬಗ್ಗೆ, ಸಮಿತಿಯ ಸದಸ್ಯ ಕಾರ್ಯದರ್ಶಿಯು ಪ್ರತಿ ತಿಂಗಳು ಗ್ರಾಮ ಪಂಚಾಯತಿಗೆ ವರದಿ ನೀಡುವುದು. ಈ ವರದಿಯ ಸಾರಾಂಶವನ್ನು ಪ್ರತಿ ಆರು ತಿಂಗಳಿಗೊಮ್ಮೆ ಪಂಚಾಯತಿ ಅಭಿವೃದ್ಧಿ ಅಧಕಾರಿಯು ಗ್ರಾಮ ಸಭೆಯಲ್ಲಿ ಮಂಡಿಸತಕ್ಕದ್ದು.

**8. ಸಮಿತಿಯ ಸಭೆಗಳು.- (1) ನೀರು ಸರಬರಾಜು, ಸ್ವಚ್ಛತಾ ಸೌಕರ್ಯಗಳ ಮೇಲ್ವಿಚಾರಣೆ ಕುರಿತು ಪರಿಶೀಲನೆ ಮತ್ತು ನೀರು ಸೋರಿಕೆ, ಪೈಪ್‌ಲೈನ್, ನಲ್ಲಿವಾಲ್ವ್ ಮುಂತಾದ ಘಟಕಗಳ ಭಾಗಗಳು ಹಾನಿಗೊಳಗಾಗಿದ್ದಲ್ಲಿ ಅವುಗಳನ್ನು ದುರಸ್ತಿಪಡಿಸುವ ಮಾರ್ಗೋಪಾಯಗಳಿಗಾಗಿ ಸಮಿತಿಯು ಎರಡು ತಿಂಗಳಿಗೆ ಒಂದು ಬಾರಿ ಅಥವಾ**

**ಅನಿವಾರ್ಯಕಾರಣಗಳಿಂದಾಗಿ ಸಭೆ ಸೇರುವುದು ಅಗತ್ಯವೆಂದು ಕಂಡು ಬಂದಾಗಲೆಲ್ಲಾ ಮೂರು ದಿನಗಳು ಮುಂಚಿತವಾಗಿ ನೋಟೀಸು ನೀಡಿ ಸಭೆ ಸೇರತಕ್ಕದ್ದು.**

(2) ಸಮಿತಿಯ ಸಭೆಗಳನ್ನು ಅದ್ಯಕ್ಷರು, ತಪ್ಪಿದಲ್ಲಿ ಉಪಾಧ್ಯಕ್ಷರು ಅಥವಾ ಸಮಿತಿ ಸದಸ್ಯ ಕಾರ್ಯದರ್ಶಿ ಕರೆಯತಕ್ಕದ್ದು. ಇವರುಗಳು ತುರ್ತು ಕಾರ್ಯನಿರ್ವಹಣೆಯ ಸಂದರ್ಭಗಳಲ್ಲಿ ಸಭೆಯನ್ನು ಕರೆಯದಿದ್ದಾಗ 1/3 ಭಾಗದ ಸದಸ್ಯರು ಮೂರು ದಿನಗಳು ಮುಂಚಿತವಾಗಿ ನೋಟೀಸು ನೀಡಿ ವಿಶೇಷಸಭೆಯನ್ನು ಕರೆಯಬಹುದು. ಈ ಸಮಿತಿಯು ತೆಗೆದುಕೊಂಡ ನಿರ್ಣಯಗಳನ್ನು ಗ್ರಾಮ ಪಂಚಾಯತಿ ಅಧ್ಯಕ್ಷರ ಗಮನಕ್ಕೆ ತರಬೇಕು ಹಾಗೂ ಈ ನಿರ್ಣಯದ ಅನುಷ್ಠಾನಕ್ಕೆ ಗ್ರಾಮ ಪಂಚಾಯತಿಯ ಅಧ್ಯಕ್ಷರು ಸೂಕ್ತ ಕ್ರಮ ವಹಿಸುವುದು. ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಸಮಿತಿ ಸಭಾ ನಡವಳಿಯನ್ನು ನಿರ್ವಹಿಸಿಕೊಂಡು ಬರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

**(ಬಿ. ನವೀನ್ ಕುಮಾರ್)**
ಸರ್ಕಾರದ ಅಧೀನ ಕಾರ್ಯದರ್ಶಿ, (ಜಿ.ಪಂ.) (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಇಲಾಖೆ